| | | | |
|---|---|---|---|
| ಕರ್ನಾಟಕ ಸರ್ಕಾರ | | | (ಸಿ.ಆರ್.ಪಿ-67) |
| ಹೇಳಿಕೆ ಹಾಳೆ (ಆರ್.ಸಿ. ಸಂಖ್ಯೆ 57) ನಮೂನೆ ಸಂಖ್ಯೆ 4 | ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ಚನ್ನಪಟ್ಟಣ | | |
| | ಸಿ.ಸಿ ನಂ. 4641/2022 | | |
| | | ಸಿ.ಡಬ್ಲ್ಯೂ | 1 |
| | | ಪಿ.ಡಬ್ಲ್ಯೂ | 1 |
| ಸಾಕ್ಷಿದಾರರ ಹೆಸರು | ಸಾಗರ್ ಬಿನ್ ಪುಟ್ಟಸ್ವಾಮಿಗೌಡ | | |
| ವಯಸ್ಸು | 54 ವರ್ಷ | | |
| ಉದ್ಯೋಗ | ವ್ಯವಸಾಯ | | |
| ವಾಸಸ್ಥಳ | ಚನ್ನಪಟ್ಟಣ | | |

**ದಿನಾಂಕ 22.09.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

**1)** ಆರೋಪಿತನ ಪರಿಚಯ ಇಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ನನ್ನ ಅಣ್ಣನ ಮಗನ ಕೋರಿಕೆಯ ಮೇರೆಗೆ ನಾನು ಆಸ್ಪತ್ರೆಯಲ್ಲಿ ಒಂದು ದಾಖಲೆಗೆ ಸಹಿ ಮಾಡಿರುತ್ತೇನೆ. ಸಾಕ್ಷಿಯು ದೂರು ಮತ್ತು ದೂರಿನ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ದೂರನ್ನು ನಿಪಿ.**1** ಎಂದು, ಸಾಕ್ಷಿಯ ಸಹಿಯನ್ನು ನಿಪಿ **1**(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಸ್ಥಳ ಪಂಚನಾಮೆ ಮತ್ತು ಅದರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಪಂಚನಾಮೆಯನ್ನು ನಿಪಿ.**2** ಎಂದು, ಸಾಕ್ಷಿಯ ಸಹಿಯನ್ನು ನಿಪಿ **2**(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಅಮಾನತ್ತು ಪಂಚನಾಮೆ ಮತ್ತು ಅದರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಪಂಚನಾಮೆಯನ್ನು ನಿಪಿ.**3** ಎಂದು, ಸಾಕ್ಷಿಯ ಸಹಿಯನ್ನು ನಿಪಿ **3**(ಎ) ಎಂದು ಗುರುತಿಸಲಾಯಿತು. ನಿಪಿ.**1** ರಿಂದ **3** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ನಿಪಿ.**2** ಮತ್ತು **3** ಕ್ಕೆ ಪೋಲಿಸರ ಕೋರಿಕೆಯ ಮೇರೆಗೆ ಆಸ್ಪತ್ರೆಯಲ್ಲಿ ಸಹಿ ಮಾಡಿರುತ್ತೇನೆ.

**ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಅನುಮತಿ ಕೋರಿದ್ದು, ಕೋರಿಕೆಯ ಮೇರೆಗೆ ಅನುಮತಿ ನೀಡಲಾಗಿದೆ.**

**ಪಾಟೀ ಸವಾಲುಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

1) ದಿ.**01.08.2022** ರಂದು ಬೆಳಿಗ್ಗೆ **11** ಗಂಟೆ ಸಮಯದಲ್ಲಿ ಚನ್ನಪಟ್ಟಣ ಟೌನ್ ಪಾಲಿಟೆಕ್ನಿಕ್ ಕಾಲೇಜು ಮುಂಭಾಗ ಬೆಂಗಳೂರು ಕಡೆಗೆ ಹೋಗುವ ರಸ್ತೆಯಲ್ಲಿ ಶಂಕರ್ ಗೌಡ ರವರು ಕೆಎ**50.**ಇ**.8746** ನೇದ್ದರ ದ್ವಿಚಕ್ರವಾಹನದಲ್ಲಿ ಸಾತನೂರು ವೃತ್ತದ ಕಡೆಗೆ ಹೋಗುತ್ತಿದ್ದರು ಮತ್ತು ಆವೇಳೆಗೆ ಆರೋಪಿತನು ಕೆಎ**55**ಇಸಿ**.0983** ನೇದ್ದರ ಪಲ್ಸರ್ ವಾಹವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಮುಂದೆ ಹೋಗುತ್ತಿದ್ದ ಶಂಕರ್ ಗೌಡರ ವಾಹನಕ್ಕೆ ಡಿಕ್ಕಿ ಪಡಿಸಿದ್ದರು ಎಂಬ ಬಗ್ಗೆ ನನಗೆ ಗೊತ್ತಿಲ್ಲ. ಆ ರೀತಿ ಅಪಘಾತ ಪಡಿಸಿದ ಕಾರಣ ಶಂಕರ್ ಗೌಡ ರವರ ತಲೆ, ಕುತ್ತಿಗೆ, ಮೂಗು ಮತ್ತುಸೊಂಟ ಮುರಿದು ತೀವ್ರ ಪೆಟ್ಟುಗಳು ಬಿದ್ದಿತ್ತು ಎಂಬ ಬಗ್ಗೆ ನನಗೆ ಗೊತ್ತಿಲ್ಲ. ನಂತರ ಚಾಸಾ**-2** ರವರು ಗಾಯಾಳುವನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿ ಸೇರಿಸಿದ್ದು ನಂತರ ಹೆಚ್ಚಿನ ಚಿಕಿತ್ಸೆಗಾಗಿ ಗಾಯಾಳುವನ್ನು ಕಿಮ್ಸ ಆಸ್ಪತ್ರೆಗೆ ದಾಖಲಿಸಿದ್ದ ನಂತರ ಅಲ್ಲಿ ದಿಃ**07.08.2022** ರಂದು ಗಾಯಾಳು ಮೃತಪಟ್ಟರುತ್ತಾರೆ ಎಂಬ ಬಗ್ಗೆ ನನಗೆ ಗೊತ್ತಿಲ್ಲ. ಈ ವಿಚಾರಗಳ ಕುರಿತು ನಾನು ನಿಪಿ**.1** ರಂತೆ ದೂರು ದಾಖಲಿಸಿದ ನಂತರ ಪೊಲೀಸರು ದಿಃ**01.08.2022** ರಂದು ಗುನ್ಹಾ ಸ್ಥಳಕ್ಕೆ ಭೇಟಿ ಕೊಟ್ಟು ನಾನು ತೋರಿಸಿದ ಜಾಗದಲ್ಲಿ ಪೋಲಿಸರು ಚಾಸಾ**-2** ಮತ್ತು **3** ರವರ ಸಮಕ್ಷಮ ನಿಪಿಃ **2** ರಂತೆ ಪಂಚನಾಮೆಯನ್ನು ಮಾಡಿದ್ದರು ಹಾಗೂ ದಿಃ **07.08.2022** ರಂದು ನಿಪಿ**.3** ರಂತೆ ಅಪಘಾತಕ್ಕೊಳಪಟ್ಟ ವಾಹನಗಳನ್ನು ಜಪ್ತುಪಡಿಸಿ ಪಂಚನಾಮೆಯನ್ನು ಮಾಡಿದ್ದರು ಎಂದರೆ ಸರಿಯಲ್ಲ. ಆರೋಪಿತನು ನನಗೆ ಪರಿಚಯ ಇದ್ದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ- ಇಲ್ಲ.**

**<u>ವಾಟೀ ಸವಾಲುಃ</u> ಆರೋಪಿ ಪರ ವಕೀಲರು ವಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು)**

ಓ.ಹೆ.ಕೆ.ಸರಿ ಇದೆ.

ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳು
ಚನ್ನಪಟ್ಟಣ.